**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 48 ಆಸೇವ 2026

ಕರ್ನಾಟಕ ಸರ್ಕಾರದ ಸಚಿವಾಲಯ
ಡಾ: ಬಿ.ಆರ್. ಅಂಬೇಡ್ಕರ್ ವೀಧಿ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 08.06.2026.

## ಅಧಿಸೂಚನೆ

ಭಾರತ ಸಂವಿಧಾನದ ಅನುಚ್ಛೇದ 164(1) ರನ್ವಯ ಪ್ರದತ್ತವಾದ ಅಧಿಕಾರದಡಿ ಘನತೆವೆತ್ತ ರಾಜ್ಯಪಾಲರು, ಅಧಿಸೂಚನೆ ಸಂಖ್ಯೆ: ಜಿಎಸ್ 33 ಜಿಓಬಿ 2023, ದಿನಾಂಕ: 29.05.2026 ರಲ್ಲಿ ಕರ್ನಾಟಕ ರಾಜ್ಯದ ಮಾನ್ಯ ಮುಖ್ಯಮಂತ್ರಿಯವರಾದ ಶ್ರೀ ಸಿದ್ದರಾಮಯ್ಯ ರವರು ಮುಖ್ಯಮಂತ್ರಿ ಸ್ಥಾನಕ್ಕೆ ನೀಡಿದ್ದ ರಾಜೀನಾಮೆಯನ್ನು ಅಂಗೀಕರಿಸಿ, ಅವರ ನೇತೃತ್ವದ ಸಚಿವ ಸಂಪುಟವನ್ನು ವಿಸರ್ಜನೆಗೊಳಿಸಿರುತ್ತಾರೆ. ಸದರಿ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ದಿನಾಂಕ:29.05.2026 ರಂದು ಅಧಿಕೃತವಾಗಿ ಪ್ರಕಟಿಸಲಾಗಿರುತ್ತದೆ.

ಮಾನ್ಯ ಮುಖ್ಯಮಂತ್ರಿ ಅಥವಾ ಸಂಪುಟ ದರ್ಜೆ ಸಚಿವರ/ ರಾಜ್ಯ ಸಚಿವರ ರಾಜೀನಾಮೆ ಅಂಗೀಕಾರವಾದ ಪ್ರಯುಕ್ತ ಅಥವಾ ಬೇರೆ ಯಾವುದೇ ಕಾರಣಕ್ಕಾಗಿ ಮಂತ್ರಿ ಮಂಡಲ ರದ್ದಾದಲ್ಲಿ ಅಂತಹ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರುಗಳನ್ನು ಬಿಡುಗಡೆಗೊಳಿಸುವ ಕುರಿತು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 151 ಸಆಸೇ 1988, ದಿನಾಂಕ:16.11.1988ರ ಆದೇಶದಲ್ಲಿ ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ.

ಆದ್ದರಿಂದ ಈ ಕೆಳಕಂಡ ಮಾನ್ಯ ಸಚಿವರುಗಳ ಆಪ್ತ ಶಾಖೆಗಳಲ್ಲಿ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಅಧಿಕಾರಿಗಳನ್ನು ಕೂಡಲೇ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಲ್ಲಿ ವರದಿ ಮಾಡಿಕೊಳ್ಳುವಂತೆ ಸೂಚಿಸಿದೆ.

| ಕ್ರ.ಸಂ. | ಅಧಿಕಾರಿಯವರ ಹೆಸರು ಪದನಾಮ | ಕರ್ತವ್ಯ ನಿರ್ವಹಿಸುತ್ತಿರುವ ಶಾಖೆ |
|---|---|---|
| 1) | ಶ್ರೀ ವೀರಭದ್ರ ಹಂಚಿನಾಳ, ಕೆ.ಎ.ಎಸ್. (ಸೀನಿಯರ್ ಸೂಪರ್ ಟೈಂ ಸ್ಕೇಲ್) | ಮಾನ್ಯ ಸಣ್ಣ ನೀರಾವರಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಆಪ್ತ ಕಾರ್ಯದರ್ಶಿ |
| 2) | ಶ್ರೀ ಭೀಮಾಶಂಕರ್ ಕೆ.ಎ.ಎಸ್. (ಸೂಪರ್ ಟೈಂ ಸ್ಕೇಲ್) | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಸಚಿವರ ಆಪ್ತ ಕಾರ್ಯದರ್ಶಿ |
| 3) | ಶ್ರೀ ಸತೀಶ್ ಕುಮಾರ್ ಡಿ.ಎಂ. ಕೆ.ಎ.ಎಸ್ (ಸೂಪರ್ ಟೈಂ ಸ್ಕೇಲ್) | ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ |
| 4) | ಡಾ॥ ಚನ್ನಬಸಪ್ಪ ಕೆ. ಕೆ.ಎ.ಎಸ್ (ಸೂಪರ್ ಟೈಂ ಸ್ಕೇಲ್) | ಮಾನ್ಯ ಗೃಹ ಸಚಿವರ ಆಪ್ತ ಕಾರ್ಯದರ್ಶಿ |

| | | |
|---|---|---|
| | | |
| 5) | ಶ್ರೀ ರವಿ ಎಂ. ತಿರ್ಲಾಪುರ<br>ಕೆ.ಎ.ಎಸ್ (ಸೂಪರ್ ಟೈಂ ಸ್ಕೇಲ್) | ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ |
| 6) | ಡಾ|| ರಾಜೇಂದ್ರ ಪ್ರಸಾದ್ ಎಂ.ಎನ್<br>ಕೆ.ಎ.ಎಸ್ (ಸೂಪರ್ ಟೈಂ ಸ್ಕೇಲ್) | ಮಾನ್ಯ ಉಪ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ |
| 7) | ಶ್ರೀ ಅಜಯ್ ವಿ.<br>ಕೆ.ಎ.ಎಸ್ (ಕಿರಿಯ ಶ್ರೇಣಿ) | ಮಾನ್ಯ ಅಬಕಾರಿ ಸಚಿವರ ಆಪ್ತ ಕಾರ್ಯದರ್ಶಿ |
| 8) | ಶ್ರೀ ದೇವರಾಜ ಬಿ<br>ಕೆ.ಎ.ಎಸ್ (ಕಿರಿಯ ಶ್ರೇಣಿ) | ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿ |
| 9) | ಶ್ರೀ ನಿಶ್ಚಯ ಎನ್ ಕೆ.<br>ಕೆ.ಎ.ಎಸ್ (ಕಿರಿಯ ಶ್ರೇಣಿ) | ಮಾನ್ಯ ಕಂದಾಯ ಸಚಿವರ ವಿಶೇಷ ಕರ್ತವ್ಯಾಧಿಕಾರಿ |
| 10) | ಶ್ರೀ ಮಹೇಶ್ ಕರ್ಜಗಿ<br>ಕೆ.ಎ.ಎಸ್ (ಸೂಪರ್ ಟೈಂ ಸ್ಕೇಲ್) | ಮಾನ್ಯ ಸಭಾಪತಿಯವರ ಆಪ್ತ ಕಾರ್ಯದರ್ಶಿ |
| 11) | ಡಾ|| ಶ್ರೀಪಾದ ಎಸ್.ಬಿ.<br>ಕೆ.ಎ.ಎಸ್ (ಸೂಪರ್ ಟೈಂ ಸ್ಕೇಲ್) | ಮಾನ್ಯ ಉಪ ಸಭಾಪತಿಯವರ ಆಪ್ತ ಕಾರ್ಯದರ್ಶಿ |
| 12) | ಶ್ರೀ ಸಿ.ಎಂ. ರಾಜೇಂದ್ರ,<br>ನಿವೃತ್ತ ಕೆ.ಎ.ಎಸ್ (ಸೂಪರ್ ಟೈಂ ಸ್ಕೇಲ್) | ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ |
| 13) | ಡಾ|| ಎ.ವಿ. ಪ್ರಸನ್ನ,<br>ನಿವೃತ್ತ ಕೆ.ಎ.ಎಸ್ (ಹಿರಿಯ ಶ್ರೇಣಿ) | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ವಿಶೇಷ ಕರ್ತವ್ಯಾಧಿಕಾರಿ |
| 14) | ಶ್ರೀ ಹೆಚ್. ಎಂ. ಕೆಂಪೇಗೌಡ<br>ನಿವೃತ್ತ ಕೆ.ಎ.ಎಸ್ (ಹಿರಿಯ ಶ್ರೇಣಿ) | ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ವಿಶೇಷ ಕರ್ತವ್ಯಾಧಿಕಾರಿ. |

**ಸೂಚನೆಗಳು:**

1. ಕಛೇರಿಗಳಲ್ಲಿ ಪ್ರಸ್ತುತ ಬಾಕಿಯಿರುವ ಎಲ್ಲಾ ಭೌತಿಕ ಕಡತಗಳು/ಸ್ವೀಕೃತಿಗಳು ಮತ್ತು ಇ-ಆಫೀಸ್ ಕಡತಗಳು/ಸ್ವೀಕೃತಿಗಳನ್ನು ಸಂಬಂಧಪಟ್ಟ ಇಲಾಖೆಯ ಕಾರ್ಯದರ್ಶಿಯವರಿಗೆ ಹಿಂದಿರುಗಿಸುವುದು;
2. ಕಛೇರಿ ಉಪಯೋಗಕ್ಕಾಗಿ ಒದಗಿಸಿರುವ ಲೇಖನಿ ಸಾಮಗ್ರಿಗಳು, ಗಣಕಯಂತ್ರಗಳು ಪೀಠೋಪಕಣಗಳು ಹಾಗೂ ಇತ್ಯಾದಿ ಸಾಮಗ್ರಿಗಳನ್ನು ಕೂಡಲೇ ಸಂಬಂಧಪಟ್ಟವರಿಗೆ ಹಿಂದಿರುಗಿಸುವುದು;
3. ಗುರುತಿನ ಚೀಟಿ ಹಾಗೂ ವಾಹನ ಪಾಸ್ ಇತ್ಯಾದಿ ಪಾಸ್‌ಗಳನ್ನು ಸಂಬಂಧಪಟ್ಟವರಿಗೆ ಹಿಂದಿರುಗಿಸುವುದು;
4. ಯಾವುದೇ ಕಡತ/ಸ್ವೀಕೃತಿ/ದಾಖಲೆಗಳು ಹಾಗೂ ಇನ್ನಿತರೆ ಸಾಮಗ್ರಿಗಳೂ/ ಪೀಠೋಪಕರಣಗಳು/ಗಣಕ

ಯಂತ್ರಗಳು ಕಳೆದು ಹೋದಲ್ಲಿ ಸಂಬಂಧಪಟ್ಟ ಸಚಿವರ ಆಪ್ತ ಕಾರ್ಯದರ್ಶಿಯವರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

08.06.2016.
(ಕೇಶವಪ್ರಸಾದ್ ಕೆ.ಹೆಚ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿ.ಆ.ಸು. ಇಲಾಖೆ, (ಸೇವೆಗಳು-2).

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಸಾಮಾನ್ಯ ಮತ್ತು ಸಾಮಾಜಿಕ ಲೆಕ್ಕಪರಿಶೋಧನ)/ (ಆರ್ಥಿಕ ಮತ್ತು ಕಂದಾಯ ಘಟಕ ಪರಿಶೋಧನೆ) / (ಲೆಕ್ಕಪತ್ರ ಮತ್ತು ಲೆಕ್ಕ ಪರಿಶೋಧನೆ) ಕರ್ನಾಟಕ ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿ/ ಜಂಟಿ ಕಾರ್ಯದರ್ಶಿ/ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸಚಿವಾಲಯದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರಿಗೆ
6. ಸರ್ಕಾರದ ವಿಶೇಷ ಕಾರ್ಯದರ್ಶಿ/ಜಂಟಿ/ಉಪ ಕಾರ್ಯದರ್ಶಿ, ಸಿ.ಆ.ಸು. ಇಲಾಖೆ (ಸೇವೆಗಳು)/(ಆಡಳಿತ)/(ಸಿಬ್ಬಂದಿ)/(ಕಾರ್ಯಕಾರಿ)/(ಲೆಕ್ಕಪತ್ರ)
7. ಸಂಬಂಧ ಅಧಿಕಾರಿಗಳಿಗೆ
8. ಸರ್ಕಾರದ ಅಧೀನ ಕಾರ್ಯದರ್ಶಿ, ಸಿ.ಆ.ಸು.ಇಲಾಖೆ (ಲೆಕ್ಕಪತ್ರ- ಐ.ಆರ್.ಎಲ್.ಎ)
9. ಶಾಖಾಧಿಕಾರಿ, ಸಿ.ಆ.ಸು.ಇ (ಸೇವೆಗಳು-ಸಿ1&ಸಿ2)
10. ವೈಯಕ್ತಿಕ ಕಡತ/ ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿ

ಪ್ರತಿಯನ್ನು:

1. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಇಲಾಖೆ, ವಿಧಾನಸೌಧ.
2. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು,, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಇಲಾಖೆ (ಸೇವೆಗಳು) ವಿಧಾನಸೌಧ.